Received on 22/12/2020
WDP.

**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆಃ ಕಾಶಿಇ/ಶೈವಿ/06/ಸುತ್ತೋಲೆ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-01
ದಿನಾಂಕಃ 17.12.2020

# ಸುತ್ತೋಲೆ

ವಿಷಯ : ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳು ಆನ್‌ಲೈನ್ ಮೂಲಕ ತರಬೇತಿ/ಕಾರ್ಯಗಾರ/ಸೆಮಿನಾರ್‌ಗಳಲ್ಲಿ ಭಾಗವಹಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಿವಿಧ ವಿಶ್ವವಿದ್ಯಾಲಯಗಳು ಹಾಗೂ ಇನ್ನಿತರೆ ಸಂಸ್ಥೆಗಳಿಂದ Refresher/ Short term/ Orientation Course/ ತರಬೇತಿ/ಕಾರ್ಯಗಾರ/ಸೆಮಿನಾರ್‌ಗಳನ್ನು ಪ್ರಸ್ತುತ ಕೋವಿಡ್-19 ರ ಕಾರಣದಿಂದ ಆಲ್‌ಲೈನ್‌ನಲ್ಲಿ ಹಮ್ಮಿಕೊಳ್ಳಲಾಗುತ್ತಿದ್ದು, ಸದರಿ ಕಾರ್ಯಕ್ರಮಗಳಿಗೆ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಉಪನ್ಯಾಸಕರುಗಳು ನಿಯೋಜಿಸಲಾಗುತ್ತಿದೆ. ಈ ರೀತಿ ನಿಯೋಜನೆಗೊಂಡ ಉಪನ್ಯಾಸಕರು ಆನ್‌ಲೈನ್ ಮೂಲಕ ಹಾಜರಾಗಬೇಕಾಗಿರುತ್ತದೆ. ಆದರೆ ಹಲವಾರು ಕಾಲೇಜುಗಳ ಪ್ರಾಂಶುಪಾಲರುಗಳು ಸದರಿ ತರಬೇತಿಗಳಿಗೆ ಅಧ್ಯಾಪಕರುಗಳನ್ನು ಕಾಲೇಜಿನ ಕರ್ತವ್ಯದಿಂದ ಬಿಡುಗಡೆಗೊಳಿಸುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ.

ಈ ಸಂಬಂಧ ಯು.ಜಿ.ಸಿ ಮಾರ್ಗಸೂಚಿಗಳಲ್ಲಿ ಆನ್‌ಲೈನ್ ಮೂಲಕ ನಡೆಯುವ ತರಬೇತಿ/ಕಾರ್ಯಗಾರ/ಸೆಮಿನಾರ್‌ಗಳಲ್ಲಿ ಭಾಗವಹಿಸುವ ಉಪನ್ಯಾಸಕರುಗಳಿಗೆ ಸದರಿ ಅವಧಿಗೆ ಅನ್ಯಕಾರ್ಯನಿಮಿತ್ತ ಎಂದು ಪರಿಗಣಿಸುವ ಬಗ್ಗೆ ಯಾವುದೇ ನಿರ್ದೇಶನಗಳು ಇರುವುದಿಲ್ಲ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಆನ್‌ಲೈನ್ ಮೂಲಕ ನಡೆಯುವ Refresher/ Short term/ Orientation Course/ ತರಬೇತಿ/ಕಾರ್ಯಗಾರ/ಸೆಮಿನಾರ್ ಹಾಗೂ ಇನ್ನಿತರೆ ತರಬೇತಿಗಳಿಗೆ ನಿಯೋಜಿಸಲ್ಪಡುವ ಉಪನ್ಯಾಸಕರುಗಳನ್ನು ಕಾಲೇಜಿನ ಕರ್ತವ್ಯದಿಂದ ಬಿಡುಗಡೆಗೊಳಿಸದೆ ಕಡ್ಡಾಯವಾಗಿ ಕಾಲೇಜಿನಲ್ಲಿ ಉಪಸ್ಥಿತರಿದ್ದು, ಕಾಲೇಜಿನಿಂದಲೇ ತರಬೇತಿಗಳಲ್ಲಿ ಭಾಗವಹಿಸುವಂತೆ ಅನುಮತಿ ನೀಡಲು ಪ್ರಾಂಶುಪಾಲರಿಗೆ ಸೂಚಿಸಲಾಗಿದೆ.

22/12
ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:**

1. **ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.**

**ಪ್ರತಿಯನ್ನು :**

1. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ,ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
2. ಕಛೇರಿ ಪ್ರತಿ